ಇ) ಹೌದು. ಪರಿಣಿತ ಶಿಕ್ಷಣ ವ್ಯಂದ ಆಧುನಿಕ ಪರಿಕರಗಳನ್ನೊಳಗೊಂಡ ಸುಸಜ್ಜಿತ ಪ್ರಯೋಗಾಲಯಗಳು, ಆರೋಗ್ಯಕರ ನೈರ್ಮಲ್ಯಯುಕ್ತ ವಾತಾವರಣ ಮತ್ತು ಉತ್ತಮ ಸಂಪರ್ಕ ಮಾಧ್ಯಮಗಳು ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಲಭ್ಯ ಇವೆ.

ಕೆರೆ ಕಾಮಗಾರಿ ಪೂರ್ಣಗೊಳಿಸಲು ಮತ್ತು ಹೆರಿಗೆ ಆಸ್ಪತ್ರೆ ಹಸ್ತಾಂತರ

4508 (5291) : ಶ್ರೀ ಎಂ.ವೈ. ಘೋರ್ಪಡೆ : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ನಾಗಮಂಗಲ ತಾಲ್ಲೂಕಿನ ಹೆಚ್. ಕ್ಯಾತನಹಳ್ಳಿ ಹಾಗೂ ಶಾನುಬೋಗನಹಳ್ಳಿ ಕೆರೆ ಜಿಲ್ಲಾ ಪಂಚಾಯಿತಿ ವ್ಯಾಪ್ತಿಗೆ ಸೇರಿದ್ದು. ಈ ಕೆರೆಯ ಕೆಲಸ ಸುಮಾರು ವರ್ಷಗಳಿಂದ ಪೂರ್ತಿಯಾಗದೆ ಅರ್ಧಕ್ಕೆ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ಕೆಲಸ ಯಾವಾಗ ಪೂರ್ಣವಾಗುವುದು;

ಆ) ನಾಗಮಂಗಲ ತಾಲ್ಲೂಕಿಗೆ ಬೀಡಿಗೆನವಿಲೆ ಹೆರಿಗೆ ಆಸ್ಪತ್ರೆಯ ಕಟ್ಟಡದ ಕೆಲಸ ಜಿಲ್ಲಾ ಪಂಚಾಯತ್ ವ್ಯಾಪ್ತಿಯಿಂದ ಪೂರ್ಣಗೊಂಡಿದ್ದು ಇದನ್ನು ಆರೋಗ್ಯ ಇಲಾಖೆಗೆ ಹಸ್ತಾಂತರಿಸದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದರೆ, ಹಸ್ತಾಂತರಿಸಲು ಕ್ರಮ ಕೈಗೊಳ್ಳಲಾಗುವುದೇ;

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು)

ಅ) ಬಂದಿದೆ.

ಹೆಚ್. ಕ್ಯಾತನಹಳ್ಳಿ ಹಾಗೂ ಶಾನುಬೋಗನಹಳ್ಳಿ ಕೆರೆ ಅಭಿವೃದ್ಧಿಗೆ ಸಂಬಂಧಿಸಿದಂತೆ, ಪರಿಷ್ಕೃತ ಅಂದಾಜು ಪಟ್ಟಿಯನ್ನು ರೂ. 26.00 ಲಕ್ಷಗಳಿಗೆ ತಯಾರಿಸಲಾಗಿದ್ದು, ಅನುದಾನದ ಲಭ್ಯತೆಗೆ ಅನುಗುಣವಾಗಿ ಅಧ್ಯತೆ ಮೇಲೆ ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗುತ್ತದೆ.

ಆ) ಸರ್ಕಾರದ ಗಮನಕ್ಕೆ ಬಂದಿದೆ.

ನಾಗಮಂಗಲ ತಾಲ್ಲೂಕಿನ ಬಿಂಡಿಗೆನವಿಲೆ ಹೆರಿಗೆ ಆಸ್ಪತ್ರೆಯ ಕಟ್ಟಡದ ಕೆಲಸ ಮುಕ್ತಾಯದ ಹಂತದಲ್ಲಿದ್ದು.

ಪೂರ್ಣಗೊಂಡ ಕೂಡಲೇ ಆರೋಗ್ಯ ಇಲಾಖೆಗೆ ಹಸ್ತಾಂತರಿಸಲು ಕ್ರಮ ಕೈ-ಗೊಳ್ಳಲಾಗುವುದು.

ರಾಜ್ಯದಲ್ಲಿ ಗಣ್ಯವ್ಯಕ್ತಿಗಳಿಗೆ ಪ್ರತಿ ಜಿಲ್ಲೆಯಲ್ಲಿ ಸರ್ಕಾರದಿಂದ ಪ್ರಶಸ್ತಿ ನೀಡುವುದು

4509 (5139) : ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವೆಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಗಣ್ಯವ್ಯಕ್ತಿಗಳಿಗೆ ಅವರವರ ಸಾಧನೆಯನ್ನು ಮನಗಂಡು ಸರ್ಕಾರದಿಂದ ಪ್ರಶಸ್ತಿಯನ್ನು ನೀಡುತ್ತಿದೆಯೆ;

ಆ) ಈ ಯೋಜನೆಯನ್ನು ಪ್ರತಿ ಜಿಲ್ಲೆಗೆ ಸೀಮಿತಗೊಳಿಸಿ, ಆಯಾ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಕನಿಷ್ಠ 10 ಜನ ಗಣ್ಯವ್ಯಕ್ತಿಗಳನ್ನು ಗುರುತಿಸಿ, ಪ್ರಶಸ್ತಿಗಳನ್ನು ನೀಡಲು ಸರ್ಕಾರ ಚಿಂತಿಸಿದೆಯೇ;

ಇ) ಇಲ್ಲದೇ ಇದ್ದಲ್ಲಿ ಈ ಯೋಜನೆಯನ್ನು ಏಕೆ ಜಾರಿಗೊಳಿಸಬಾರದು ಹಾಗೂ ಇದರ ಸಾಧಕ-ಬಾಧಕಗಳೇನು ವಿವರ ನೀಡುವುದು.